# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1343
2. ಸದಸ್ಯರ ಹೆಸರು : ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 16.03.2026.
4. ಉತ್ತರಿಸಬೇಕಾದ ಸಚಿವರು : ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಮ್ಸ್‌ನ Bye Law ಪ್ರಕಾರ ನಿರ್ದೇಶಕರ ಹುದ್ದೆಗೆ ಖಾಯಂ ನಿರ್ದೇಶಕರನ್ನು 6 ತಿಂಗಳ ಒಳಗಾಗಿ ನೇಮಕಾತಿ ಮಾಡಬೇಕಾಗಿರುತ್ತದೆ. ಆದರೆ ಪ್ರಸ್ತುತ ಇರುವ ನಿರ್ದೇಶಕರು 2 ವರ್ಷದಿಂದ ಪ್ರಭಾರ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದು, ಯಾವಾಗ ಖಾಯಂ ನಿರ್ದೇಶಕರನ್ನಾಗಿ ನೇಮಕ ಮಾಡಲಾಗುವುದು; ಇದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ನೇಮಕಾತಿ ಪ್ರಕ್ರಿಯೆಯನ್ನು ಈಗಾಗಲೇ ಮಾಡಬೇಕೆಂದು ಸಾರ್ವಜನಿಕರಿಂದ ಒತ್ತಾಯವಾಗಿದೆಯೇ? (ಮಾಹಿತಿ ನೀಡುವುದು) | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ 2023ರ Bye Law ಪ್ರಕಾರ ನಿರ್ದೇಶಕರ ಹುದ್ದೆಗೆ ಖಾಯಂ ನಿರ್ದೇಶಕರನ್ನು 6 ತಿಂಗಳ ಒಳಗಾಗಿ ನೇಮಕಾತಿ ಮಾಡುವ ಬಗ್ಗೆ ನಿರ್ದಿಷ್ಟ ನಿಯಮ ಇರುವುದಿಲ್ಲ.<br><br>ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆಡಳಿತ ಮಂಡಳಿಯ ವಿಶೇಷ ಸಭೆ ದಿನಾಂಕ:18.05.2025ರ ನಿರ್ಣಯದನ್ವಯ ಸಂಸ್ಥೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದ್ದು, ಆರ್ಥಿಕ ಇಲಾಖೆಯ ಸಹಮತಿ/ಅನುಮೋದನೆಗಾಗಿ ಸಲ್ಲಿಸಲಾಗಿರುತ್ತದೆ.<br><br>ವೃಂದ ಮತ್ತು ನೇಮಕಾತಿ ನಿಯಮಗಳು ಅಂತಿಮವಾಗಿ ಜಾರಿಗೊಂಡ ನಂತರ, ಸಂಸ್ಥೆಯ ಖಾಯಂ ನಿರ್ದೇಶಕರ ಹುದ್ದೆಯ ನೇಮಕಾತಿ ಪ್ರಕ್ರಿಯೆಯನ್ನು ತ್ವರಿತವಾಗಿ ಕೈಗೊಳ್ಳಲಾಗುವುದು.<br><br>ಸಂಸ್ಥೆಯ ಆಡಳಿತಾತ್ಮಕ ಹಿತದೃಷ್ಟಿಯಿಂದ ನಿರ್ದೇಶಕರ ಹುದ್ದೆಯನ್ನು ಪ್ರಸ್ತುತ, ಪ್ರಭಾರದಲ್ಲಿ ನಿರ್ವಹಿಸಲಾಗುತ್ತಿದೆ. |

**ಸಂಖ್ಯೆ:** ಎಂಇಡಿ 69 ಕೆಯುಎಂ 2026

**(ಡಾ: ಶರಣಪ್ರಕಾಶ ಆರ್. ಪಾಟೀಲ್)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು